ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(4)/16/2021

ತಾಂತ್ರಿಕ ಶಿಕ್ಷಣ ಆಯುಕ್ತಾಲಯ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 05.10.2024

**ಅಧಿಕೃತ ಜ್ಞಾಪನ**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ಉಳಿದ ಮೂಲ ವೃಂದ ಮತ್ತು ಸ್ಥಳೀಯ ವೃಂದದಲ್ಲಿ ಖಾಲಿಯಿದ್ದ ಕಾರ್ಯಾಗಾರ ವಿಭಾಗದ ಮೆಕ್ಯಾನಿಕ್ (ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ ವಿಭಾಗ) ಹುದ್ದೆಗೆ ನೀಡಿರುವ ಸ್ಥಾನಪನ್ನ ಬಡ್ತಿಯನ್ನು ಹಿಂಪಡೆಯುವ ಕುರಿತು.

**ಉಲ್ಲೇಖ:** 1. ತಾಂತ್ರಿಕ ಶಿಕ್ಷಣ ಇಲಾಖೆಯ ಆದೇಶ ಸಂಖ್ಯೆ: DTE-ADMIOEST(4)/16/2021, ದಿ: 27.08.2024.
2. ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಾವಳಿ, 1977 ರ ನಿಯಮ.

*****

ಉಲ್ಲೇಖ(1) ರ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಉಳಿದ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿನ ಕಾರ್ಯಾಗಾರ ವಿಭಾಗದ ಹೆಲ್ಪರ್ (ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ ವಿಭಾಗ) ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅರ್ಹ ಸಿಬ್ಬಂದಿಗಳಿಗೆ ಖಾಲಿಯಿರುವ ಗ್ರೂಪ್-ಸಿ ವೃಂದದ ವೇತನ ಶ್ರೇಣಿ ರೂ. 34100-64600 ರಲ್ಲಿನ ಮೆಕ್ಯಾನಿಕ್ (ಮೆಕ್ಯಾನಿಕಲ್ ಇಂಜಿನಿಯರಿಂಗ್ ಮತ್ತು ಸಂಯೋಜಿತ ವಿಭಾಗ, ಆಟೋಮೊಬೈಲ್, ಸಿವಿಲ್, ಎಲೆಕ್ಟ್ರಿಕಲ್, ಟೆಕ್ಸ್‌ಟೈಲ್ ಮತ್ತು ವಿಜ್ಞಾನ ವಿಭಾಗ) ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಲಾಗಿತ್ತು. ಮುಂಬಡ್ತಿ ಹೊಂದಿರುವ ಕೆಳಕಂಡ ಹೆಲ್ಪರ್ ಇಲ್ಲಿಯವರೆಗೆ ಮುಂಬಡ್ತಿ ಹುದ್ದೆಯಲ್ಲಿ ಕಾರ್ಯವರದಿ ಮಾಡಿಕೊಂಡಿರುವುದಿಲ್ಲ. ಸದರಿಯವರುಗಳಿಗೆ ಮುಂಬಡ್ತಿ ನೀಡಿರುವ ಆದೇಶದಲ್ಲಿ, ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ ಎಂದು ತಿಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಉಲ್ಲೇಖ(1) ರಲ್ಲಿ ಕೆಳಕಂಡ ಸಿಬ್ಬಂದಿಗಳಿಗೆ ಹೆಲ್ಪರ್ ವೃಂದದಿಂದ ಮೆಕ್ಯಾನಿಕ್ ಹುದ್ದೆಗೆ ನೀಡಿರುವ ಸ್ಥಾನಪನ್ನ ಬಡ್ತಿಯನ್ನು ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಾವಳಿ, 1977 ರ ನಿಯಮ 4(ಎ) ರಂತೆ ಹಿಂಪಡೆಯಲಾಗಿದೆ.

| ಕ್ರ. ಸಂ. | ಮುಂಬಡ್ತಿ ಆದೇಶದ ಕ್ರಮಾಂಕ | ಹೆಲ್ಪರ್ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು | ಮೆಕ್ಯಾನಿಕ್ ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿದ್ದ ಸಂಸ್ಥೆ |
|---|---|---|---|
| ಉಳಿದ ಮೂಲ ವೃಂದ | | | |
| 1. | 5 | ದೇವೇಂದ್ರಪ್ಪ<br>ಡಿ.ಆರ್.ಆರ್. ಸರ್ಕಾರಿ ಪಾಲಿಟೆಕ್ನಿಕ್, ದಾವಣಗೆರೆ | ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು |
| 2. | 9 | ಸುರೇಶ್ ಆರ್.<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಪಾಲಿಟೆಕ್ನಿಕ್, ಚಾಮರಾಜನಗರ |

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ:-**

1. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
2. ಸಂಬಂಧಪಟ್ಟ ಹೆಲ್ಪರ್ ಗಳಿಗೆ (ಸಂಬಂಧಿಸಿದ ಪ್ರಾಂಶುಪಾಲರ ಮುಖಾಂತರ);
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

**ಪ್ರತಿ:-**

1. ಆಪ್ತಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಶಾಖಾ ರಕ್ಷಾ ಕಡತ.